ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	– 1037(1287)
2.	ಮಾನ್ಯ ಸದಸ್ಯರ ಹೆಸರು	– ಶ್ರೀ. ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
3.	ಉತ್ತರಿಸುವ ದಿನಾಂಕ	– 15/03/2021
4.	ಉತ್ತರಿಸುವ ಸಚಿವರು	– ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಪ್ರಶ್ನೆ	ಉತ್ತರ
ಅ) ಹೊಸದಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳು ಕಾರ್ಯಾರಂಭಗೊಂಡಿದೆಯೇ;	ರಾಜ್ಯದಲ್ಲಿ 2017–18ನೇ ಸಾಲಿನಲ್ಲಿ 50 ತಾಲ್ಲೂಕುಗಳು ಮತ್ತು 2019–20ನೇ ಸಾಲಿನಲ್ಲಿ 12 ತಾಲ್ಲೂಕುಗಳು ಸೇರಿ ಒಟ್ಟು 62 ಹೊಸ ತಾಲ್ಲೂಕುಗಳ ರಚನೆಯಾಗಿದ್ದು, ಈ ಪೈಕಿ ಬೆಂಗಳೂರು ಉತ್ತರ ವಲಯ–4 (ಯಲಹಂಕ), ಕೆ.ಜಿ.ಎಫ್., ಹನೂರು, ಮೂಡಬಿದ್ರೆ, ಬ್ರಹ್ಮಾವರ, ಬೈಂದೂರು, ನಿಪ್ಪಾಣಿ, ಕಾಗವಾಡ, ಚಡಚಣ, ಹುಬ್ಬಳ್ಳಿ ನಗರ, ಬಳ್ಳಾರಿ (ಪೂರ್ವ)(ಕುರಗೋಡು), ಮೂಡಲಗಿ ಈ ಹೊಸ ತಾಲ್ಲೂಕುಗಳಲ್ಲಿ ಈಗಾಗಲೇ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳು ಕಾರ್ಯಾರಂಭವಾಗಿರುತ್ತವೆ.
ಆ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳು ಹೊಸ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯಾರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕೈಗೊಂಡ ಕ್ರಮಗಳೇನು;	ಬಂದಿದೆ. ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳನ್ನು ಪ್ರಾರಂಭಿಸಲು ಅಗತ್ಯವಿರುವ ವಿವಿಧ ವೃಂದಗಳ ಸುಮಾರು 1000ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. ಈ ಪ್ರಸ್ತಾವನೆಯನ್ನು ಆಯವ್ಯಯ ಪೂರ್ವಬಾವಿ ಸಭೆಯಲ್ಲಿ ಮಂಡಿಸಲಾಗಿತ್ತು. ಪ್ರಸ್ತುತ ಕೋವಿಡ್–19ರ ಹಿನ್ನೆಲೆಯಲ್ಲಿ ಆರ್ಥಿಕ ಸಂಪನ್ಮೂಲದ ಕೊರತೆ ಇರುವುದರಿಂದ ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು 2021–22ನೇ ಸಾಲಿನ ಆಯವ್ಯಯದಲ್ಲಿ ಪರಿಗಣಿಸಿರುವುದಿಲ್ಲ. ಆದ್ದರಿಂದ, ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಆಯಾ ವಿಭಾಗದ ಸಿಟಿಇ, ಡಯಟ್ ಹಾಗೂ ಇತರೆ ಕಚೇರಿಗಳಲ್ಲಿ ಹೆಚ್ಚುವರಿಯಾಗಿ ಲಭ್ಯವಿರುವ ಹಾಗೂ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಹುದ್ದೆ ಸಮೇತ ಸ್ಥಳಾಂತರಗೊಳಿಸಿ, ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಶಾಲೆಗಳಲ್ಲಿ ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.
ಇ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳು ನಿಗದಿತ ಸಮಯಕ್ಕೆ ಕಾರ್ಯಾರಂಭ ಮಾಡದೇ ಇರುವುದರಿಂದ ಶೈಕ್ಷಣಿಕ ಗುಣಮಟ್ಟ ಹಾಗೂ ಶಿಕ್ಷಕರಿಗೆ ಆಡಳಿತಾತ್ಮಕ ಸೌಲಭ್ಯಗಳು ಸಿಗುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರಿಸುವುದು).	

ಸಂಖ್ಯೆ: ಇಪಿ 11 ಪಿಡಿಬಿ 2021

(ಎಸ್. ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು